Date : 27.04.2026

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಂದುವರಿದ ಮುಖ್ಯ ವಿಚಾರಣೆ – ಅರ್ಜಿದಾರರ ಪರ ಶ್ರೀ.ಎನ್ ಡಿ ಎಂ ವಕೀಲರ ಪರ ಶ್ರೀಮತಿ.ಹೆಚ್.ಆರ್ ವಕೀಲರಿಂದ–**

ನನ್ನ ಸಾಕ್ಷಿಗೆ ಬೆಂಬಲಿತವಾಗಿ, ನನ್ನ ಮಾಲೀಕತ್ವದ ಸ್ವಾಧೀನ ಪಡಿಸಿಕೊಂಡ ಜಮೀನಿನ ಬಾಬ್ತು ನೀಡಿದ ಪರಿಹಾರ ಕಡಿಮೆ ಇರುವುದೆಂದು ಹೇಳುತ್ತಾ ನಾನು ಚಿತ್ರದುರ್ಗ ಜಿಲ್ಲಾಧಿಕಾರಿಗಳಿಗೆ ಅರ್ಜಿ ಸಲ್ಲಿಸಿದ್ದು, ಅದರ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿಪಿ–1 ಎಂದು, ಅರ್ಜಿಯಲ್ಲಿ ಕಾಣಿಸಿದ ಆಸ್ತಿಯ ಬಗ್ಗೆ ಇರುವ 2 ಪಹಣಿ ಪ್ರತಿ ಮತ್ತು ದಿಃ 03.03.2022 ರ ದಿನಾಂಕದ ಅವಾರ್ಡ ನೋಟೀಸಿನ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–2 ರಿಂದ 4 ಎಂದು ಗುರುತಿಸಲಾಯಿತು.

ಮೇಲಿನ ನನ್ನ ಸಾಕ್ಷಿಯನ್ನು ಪರಿಗಣಿಸಿ ಅರ್ಜಿಯಲ್ಲಿ ಕೋರಿದಂತೆ ಎದುರುದಾರರ ವಿರುದ್ಧ ಆದೇಶ ಮಾಡಲು ಕೋರುತ್ತೇನೆ.

**– ಪಾಟೀ ಸವಾಲು – 1 ಮತ್ತು 2 ನೇ ಎದುರುದಾರ ಪರ ಶ್ರೀ ಜಿ.ಎಸ್.ಎ ವಕೀಲರಿಂದ –**

ವಕೀಲರು ಹಾಜರಿದ್ದು, ಕಾಲಾವಕಾಶ ಕೋರುತ್ತಿದ್ದು, ಕಾಲಾವಕಾಶ ನೀಡಿ ಪಾಟೀ ಸವಾಲು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ)
*ಓದಿ ಹೇಳಿ ಕೇಳಿ ಸರಿ ಇದೆ.*

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ.